# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ನ್ಯಾಯಯುತವಾಗಿ ಧರ್ಮಮಾರ್ಗದಲ್ಲಿ ನಡೆಯುವ ವ್ಯಕ್ತಿಯ ಸುಪ್ತ ಮನಸ್ಸು ಶಾಂತವಾಗಿರುತ್ತದೆ. ಆ ವ್ಯಕ್ತಿ ನೆಮ್ಮದಿಯ ಬದುಕನ್ನು ಕಾಣುತ್ತಾನೆ.. ಅಧರ್ಮದ ದಾರಿಯಲ್ಲಿ ನಡೆದೂ, ಸನ್ಮಾನಕ್ಕೆ ಒಳಗಾಗುವವನ ಮನಸ್ಸು ಗೊಂದಲಕ್ಕೀಡಾಗುತ್ತದೆ ಅವನು ಸುಖಮಯ ಜೀವನ ನಡೆಸಲು ಸಾಧ್ಯವಿಲ್ಲ.. ಅನೇಕ ಪಾಪಕರ್ಮಗಳನ್ನು ಹೊತ್ತುಕೊಂಡು ಸೃಷ್ಟಿಯಲ್ಲಿ ಜನಿಸಿದರೂ, ಆತನ ನಡತೆಯಿಂದ ಮತ್ತು ಆತ ಮಾಡುವ ಉತ್ತಮ ಕಾರ್ಯಗಳಿಂದ ಆತನ ಪಾಪ ಪುಣ್ಯಗಳನ್ನು ಅಳೆಯಲಾಗುತ್ತದೆ..

**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 10-04-2026 to 16-04-2026 ಬೆಲೆ:10-00 ಸಂಪುಟ–1 ಸಂಚಿಕೆ–28 ಪುಟಗಳು–6









ಕಾಡಂಚಿನ ಪ್ರದೇಶಗಳಲ್ಲಿ ಕಾಡಾನೆಗಳ ಉಪಟಳ ಮಿತಿಮೀರಿದ್ದು, ಕಾಡುಪ್ರಾಣಿಗಳು ಕೃಷಿ ಹಾನಿಯ ಜೊತೆಗೆ ಇದೀಗ ವಾಹನಗಳನ್ನು ಜಖಂಗೊಳಿಸುತ್ತಿರುವುದು ಜನರಲ್ಲಿ ತೀವ್ರ ಆತಂಕ ಮೂಡಿಸಿದೆ. ಬೆಳ್ತಂಗಡಿ ಮಾತ್ರವಲ್ಲದೆ ಕಡಬ ಮತ್ತು ಸುಳ್ಯ ಭಾಗಗಳಲ್ಲೂ ಆನೆಗಳ ಹಾವಳಿ ಮುಂದುವರಿದಿದೆ. ಪ್ರಸ್ತುತ ಎಲಿಫೆಂಟ್ ಟಾಸ್ಕ್ ಫೋರ್ಸ್‌ನ 25 ಸದಸ್ಯರ ತಂಡ ಸ್ಥಳದಲ್ಲಿ ಬೀಡುಬಿಟ್ಟಿದ್ದು, ಆನೆಗಳ ಚಲನವಲನದ ಮೇಲೆ ನಿಗಾ ಇಟ್ಟಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ರಾತ್ರಿ ವೇಳೆ ಜನರು ಹೆಚ್ಚಿನ ಜಾಗ್ರತೆ ವಹಿಸುವಂತೆ ಸೂಚಿಸಿದ್ದಾರೆ.

## ಬಿಸಿಲ ಧಗೆಗೆ ಮಂಗಳೂರಿಗೆ ನೀರಿನ ಹಾಹಾಕಾರ?




**ಮಂಗಳೂರು:** ಕರಾವಳಿಯಲ್ಲಿ ದಿನದಿಂದ ದಿನಕ್ಕೆ ಬಿಸಿಲಿನ ತಾಪಮಾನ ಏರಿಕೆಯಾಗುತ್ತಿದ್ದು, ಮಂಗಳೂರು ನಗರದ ಜೀವನಾಡಿ ನೇತ್ರಾವತಿ ಬತ್ತುತ್ತಿದ್ದಾಳೆ. ಇದರ ಪರಿಣಾಮ ತುಂಬೆ ವೆಂಟೆಡ್ ಡ್ಯಾಂನಲ್ಲಿ ನೀರಿನ ಮಟ್ಟ ಗಣನೀಯವಾಗಿ ಇಳಿಕೆಯಾಗುತ್ತಿದೆ. ಡ್ಯಾಂನ ನೀರಿನ ಮಟ್ಟ 5.75 ಮೀಟರ್‌ಗೆ ತಲುಪಿದ್ದು, ನಗರದಲ್ಲಿ ಕುಡಿಯುವ ನೀರಿನ ಆತಂಕ ಶುರುವಾಗಿದೆ. ಕಳೆದ ಕೆಲವು ದಿನಗಳಿಂದ ಜಿಲ್ಲೆಯಾದ್ಯಂತ ವಿಪರೀತ ಸೆಕೆ ಹಾಗೂ ಸುಡು ಬಿಸಿಲಿನ ವಾತಾವರಣವಿದ್ದು, ನದಿಗಳಲ್ಲಿನ ಒಳಹರಿವು ಸಂಪೂರ್ಣ 3ನೇ ಪುಟಕ್ಕೆ

## ಸಮಾಜದಲ್ಲಿ ಒಡಕು ಮೂಡಿಸಿ ಓಲೈಕೆ ರಾಜಕಾರಣ –ಕಾಮತ್



**ಮಂಗಳೂರು:** "ನಮಾಜ್ ಮಾಡುವಾಗ ಹಾವು ಕಂಡರೆ ಮೊದಲು ಅದನ್ನು ಕೊಲ್ಲಬೇಕು ಎನ್ನುವ ಉದಾಹರಣೆ ನೀಡಿ, ಬಿಜೆಪಿ–ಆರ್‌ಎಸ್‌ಎಸ್ ಅನ್ನು ವಿಷಪೂರಿತ ಹಾವಿಗೆ ಹೋಲಿಸಿರುವುದು ಕಾಂಗ್ರೆಸ್‌ನ ದ್ವೇಷದ ರಾಜಕಾರಣವನ್ನು ತೋರಿಸುತ್ತದೆ. ಪ್ರಜಾಪ್ರಭುತ್ವದಲ್ಲಿ ಸೈದ್ಧಾಂತಿಕ ಭಿನ್ನಾಭಿಪ್ರಾಯಗಳಿರಬಹುದು, ಆದರೆ ಇಂತಹ ಪ್ರಚೋದನಾಕಾರಿ ಭಾಷಣಗಳ ಮೂಲಕ ಸಮಾಜದಲ್ಲಿ ಒಡಕು ಮೂಡಿಸಿ ಓಲೈಕೆ ರಾಜಕಾರಣ ಮಾಡುವುದು ಸರಿಯಲ್ಲ" ಎಂದು ಶಾಸಕರು ಕಿಡಿಕಾರಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಚುನಾವಣಾ ಸಭೆಯೊಂದರಲ್ಲಿ ಬಿಜೆಪಿ ಹಾಗೂ ಆರ್‌ಎಸ್‌ಎಸ್ ವಿರುದ್ಧ 3ನೇ ಪುಟಕ್ಕೆ

## ಪಿಯುಸಿ ಫಲಿತಾಂಶ: ಹೆಣ್ಣು ಮಕ್ಕಳೇ ಮೇಲುಗೈ




**ಬೆಂಗಳೂರು:** ರಾಜ್ಯದ ಪೋಷಕರು ಮತ್ತು ವಿದ್ಯಾರ್ಥಿಗಳು ಕುತೂಹಲದಿಂದ ಕಾಯುತ್ತಿದ್ದ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶ ಅಧಿಕೃತವಾಗಿ ಪ್ರಕಟಗೊಂಡಿದೆ. ಈ ವರ್ಷ ಸುಮಾರು 7.10 ಲಕ್ಷ ವಿದ್ಯಾರ್ಥಿಗಳು ಹಾಜರಾಗಿದ್ದು, ಈ ಬಾರಿ ಕರ್ನಾಟಕದ ಒಟ್ಟಾರೆ ಉತ್ತೀರ್ಣ ಪ್ರಮಾಣವು ಶೇಕಡಾ 86.48 ರಷ್ಟಾಗಿದ್ದು, ರಾಜ್ಯದ ಶೈಕ್ಷಣಿಕ ಇತಿಹಾಸದಲ್ಲಿ ಉತ್ತಮ ಸಾಧನೆ ದಾಖಲಾಗಿದೆ. ಪ್ರತಿ ವರ್ಷದಂತೆ ಈ ಬಾರಿಯೂ ಹೆಣ್ಣು ಮಕ್ಕಳು ಗಂಡು ಮಕ್ಕಳಿಗಿಂತ ಹೆಚ್ಚಿನ 3ನೇ ಪುಟಕ್ಕೆ






## ಬಿಸಿಲ ಧಗೆಗೆ ಮಂಗಳೂರಿಗೆ ನೀರಿನ ಹಾಹಾಕಾರ?

ಒಂದನೇ ಪುಟದಿಂದ......

ಸ್ಥಗಿತಗೊಂಡಿದೆ. ಬೆಳ್ತಂಗಡಿ ಹಾಗೂ ಉಪ್ಪಿನಂಗಡಿ ಭಾಗದಲ್ಲಿ ಮಳೆಯಾಗುತ್ತಿದ್ದರೂ, ಆ ನೀರು ಇನ್ನೂ ತುಂಬೆ ಜಲಾಶಯವನ್ನು ತಲುಪಿಲ್ಲ. ಪ್ರಸ್ತುತ ಎಎಂಆರ್ ಮತ್ತು ಜಕ್ರಿಬೆಟ್ಟು ಡ್ಯಾಂಗಳಲ್ಲಿ ನೀರು ಸಂಗ್ರಹವಿದ್ದು, ಮೇಲ್ಭಾಗದಲ್ಲಿ ಮಳೆ ಮುಂದುವರಿದು ಅಲ್ಲಿಂದ ನೀರು ಹರಿದು ಬಂದರೆ ಮಾತ್ರ ತುಂಬೆ ಡ್ಯಾಂನ ಮಟ್ಟ ಏರಿಕೆಯಾಗಲು ಸಾಧ್ಯವಿದೆ. ಈಗಾಗಲೇ ಸುರತ್ಕಲ್, ಕಾಟಿಪಳ್ಳ, ಪಾಂಡೇಶ್ವರ ಸೇರಿದಂತೆ ನಗರದ ವಿವಿಧ ಭಾಗಗಳಲ್ಲಿ ನೀರಿನ ಸಮಸ್ಯೆ ಕಾಣಿಸಿಕೊಂಡಿದೆ. ನಗರಕ್ಕೆ ಪ್ರತಿನಿತ್ಯ 162 ಎಂಎಲ್‌ಡಿ ನೀರು ಪೂರೈಕೆಯಾಗುತ್ತಿದ್ದು, ಮುಂಗಾರು ಪೂರ್ವ ಮಳೆ ವಿಳಂಬವಾದರೆ ಮುಂದಿನ ಎರಡು ತಿಂಗಳು ನೀರಿನ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರುಕುಡಿಯುವ ನೀರನ್ನು ಪೋಲು ಮಾಡದೆ ಅತ್ಯಂತ ಮಿತವಾಗಿ ಬಳಸುವಂತೆ ಮಹಾನಗರ ಪಾಲಿಕೆ ಮನವಿ ಮಾಡಿದೆ.

## ಪಿಯುಸಿ ಪಲಿತಾಂಶ : ಹೆಣ್ಣು ಮಕ್ಕಳೇ ಮೇಲುಗೈ

ಒಂದನೇ ಪುಟದಿಂದ......

ಸಂಖ್ಯೆಯಲ್ಲಿ ತೇರ್ಗಡೆಯಾಗುವ ಮೂಲಕ ವಿಜಯಪತಾಕೆ ಹಾರಿಸಿದ್ದಾರೆ. ಜಿಲ್ಲಾವಾರು ಸಾಧನೆಯಲ್ಲಿ ಉಡುಪಿ ಜಿಲ್ಲೆಯು 93.90% ಪಡೆದು ರಾಜ್ಯಕ್ಕೇ ಮೊದಲ ಸ್ಥಾನ ಪಡೆದು ತನ್ನ ಶೈಕ್ಷಣಿಕ ಹಿರಿಮೆಯನ್ನು ಉಳಿಸಿಕೊಂಡಿದ್ದರೆ, ದಕ್ಷಿಣಕನ್ನಡ ಜಿಲ್ಲೆಯು 93.57% ಪಡೆದು ದ್ವಿತೀಯ ಸ್ಥಾನವನ್ನು ಅಲಂಕರಿಸಿದೆ. ಬೆಂಗಳೂರು ದಕ್ಷಿಣಜಿಲ್ಲೆ 85.36 % ಪಡೆದು ಮೂರನೇ ಸ್ಥಾನದಲ್ಲಿದೆ. ವಿಭಾಗವಾರು ಫಲಿತಾಂಶದಲ್ಲಿ ವಿಜ್ಞಾನ ವಿಭಾಗವುಅತಿ ಹೆಚ್ಚು ಅಂಕಗಳೊಂದಿಗೆ ಮುಂಚೂಣಿಯಲ್ಲಿದೆ. ವಿಶೇಷವಾಗಿ ವಿಜ್ಞಾನ ವಿಭಾಗದ ಕುಂದನ್ ಕೃಷ್ಣ ಅವರು 600ಕ್ಕೆ 600 ಅಂಕಗಳನ್ನು ಪಡೆಯುವ ಮೂಲಕ ಇಡೀರಾಜ್ಯದ ಗಮನ ಸೆಳೆದಿದ್ದಾರೆ. ಮೂಡುಬಿದಿರೆಯ ಆಳ್ವಾಸ್ ಪಿಯುಕಾಲೇಜಿನ ವಿದ್ಯಾರ್ಥಿನಿ ದಿಶಾ 2005-26ರ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ, ವಾಣಿಜ್ಯ ವಿಭಾಗದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ. ತೇರ್ಗಡೆಯಾದ ಎಲ್ಲಾ ವಿದ್ಯಾರ್ಥಿಗಳಿಗೂ ಅಭಿನಂದನೆಗಳು ಸಲ್ಲುತ್ತಿದ್ದು, ಫಲಿತಾಂಶವು ರಾಜ್ಯಾದ್ಯಂತ ಸಂಭ್ರಮದ ವಾತಾವರಣವನ್ನು ನಿರ್ಮಿಸಿದೆ. ಅಲ್ಪ ಅಂಕಗಳಿಂದ ವಂಚಿತರಾದ ವಿದ್ಯಾರ್ಥಿಗಳಿಗೆ ಮುಂದಿನ ಪರೀಕ್ಷೆಯ ಮೂಲಕ ಸಾಧಿಸಲು ಮತ್ತೊಂದು ಅವಕಾಶವಿದ್ದು, ಎಲ್ಲರ ಭವಿಷ್ಯವೂ ಉಜ್ವಲವಾಗಲಿ ಎಂದು ಹಾರೈಸಲಾಗಿದೆ.

## ಸಮಾಜದಲ್ಲಿ ಒಡಕು ಮೂಡಿಸಿ ಓಲೈಕೆ ರಾಜಕಾರಣ – ಕಾಮತ್

ಒಂದನೇ ಪುಟದಿಂದ......

ಆಕ್ಷೇಪಾರ್ಹ ಭಾಷೆ ಬಳಸಿರುವುದನ್ನು ಮಂಗಳೂರು ದಕ್ಷಿಣ ಶಾಸಕ ವೇದವ್ಯಾಸ ಕಾಮತ್ ತೀವ್ರವಾಗಿ ಖಂಡಿಸಿದ್ದಾರೆ. ಖರ್ಗೆಯವರ ಭಾಷಣವು ಕೋಮುಗಲಭೆಗೆ ಪ್ರಚೋದನೆ ನೀಡುವಂತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಬಗ್ಗೆ ಮಾತನಾಡುವ ಕಾಂಗ್ರೆಸ್‌ನ ನೈಜ ಸಿದ್ಧಾಂತವೇ ವಿಭಜನೆ ಎಂದು ಟೀಕಿಸಿದ ಅವರು, ಇಂತಹ ದ್ವೇಷಪೂರಿತ ಹೇಳಿಕೆ ನೀಡಿದ ಮಲ್ಲಿಕಾರ್ಜುನ ಖರ್ಗೆಯವರು ಕೂಡ ಲೇದೇಶದ ಜನತೆ ಹಾಗೂ ಬಿಜೆಪಿ-ಆರ್‌ಎಸ್‌ಎಸ್ ಕಾರ್ಯಕರ್ತರ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು.

## ಹನುಮಗಿರಿಗೆ ಭಕ್ತಿಭಾವದ ಭವ್ಯ ಹೊರೆಕಾಣಿಕೆ



ಪುತ್ತೂರು : ತಾಲೂಕಿನ ಈಶ್ವರಮಂಗಲದ ಪುಣ್ಯಕ್ಷೇತ್ರ ಶ್ರೀ ಹನುಮಗಿರಿ ಕೋದಂಡ ರಾಮ-ಪಂಚಮುಖಿ ಆಂಜನೇಯ ಸನ್ನಿಧಿಯಲ್ಲಿ ಭಕ್ತಿಯ ಪರಾಕಾಷ್ಠೆ ಕಂಡುಬಂದಿತು. ಹತ್ತು ವರ್ಷಗಳ ಸುದೀರ್ಘ ಕಾಯುವಿಕೆಯ ನಂತರ ನಡೆಯುತ್ತಿರುವ ಕ್ಷೇತ್ರ ಬ್ರಹ್ಮಕಲಶೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಭವ್ಯ ಹೊರೆಕಾಣಿಕೆ ಮೆರವಣಿಗೆಯು ಇಡೀ ಊರನ್ನೇ ಸಂಭ್ರಮದಲ್ಲಿ ತೇಲಿಸಿತು. ಈಶ್ವರಮಂಗಲದ ಗಜಾನನ ಮಂಡಳಿಯ ಮುಂಭಾಗದಿಂದ ಆರಂಭಗೊಂಡ ಈ ಮೆರವಣಿಗೆಯಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಪಾಲ್ಗೊಂಡು ದೇವರಿಗೆ ಸಮರ್ಪಣೆ ಮಾಡ ಬೇಕಾದ ದವಸ ಧಾನ್ಯಗಳನ್ನು ಭಕ್ತಿಯಿಂದ ಹೊತ್ತು ತಂದರು. ಈ ಕಾರ್ಯಕ್ರಮದಲ್ಲಿ ಹತ್ತೂರ ಸಮಸ್ತ ಭಕ್ತರು ಶಿಸ್ತುಬದ್ಧವಾಗಿ ಪಾಲ್ಗೊಂಡಿದ್ದರು.

## ಬಂಟರ ಯಾನೆ ನಾಡವರ ಮಾತೃ ಸಂಘದ ಅಧಿವೇಶನ



ಮಂಗಳೂರು : ಬಂಟರ ಯಾನೆ ನಾಡವರ ಮಾತೃ ಸಂಘದ ಬಹಿರಂಗ ಅಧಿವೇಶನವು ಏಪ್ರಿಲ್ 12ರಂದು ಬೆಳಿಗ್ಗೆ 9 ಗಂಟೆಗೆ ನಗರದ ಪುರಭವನದಲ್ಲಿ ಜರುಗಲಿದೆ ಎಂದು ಸಂಘದ ಅಧ್ಯಕ್ಷ ಅಜಿತ್ ಕುಮಾರ್ ರೈ ಮಾಲಾಡಿ ತಿಳಿಸಿದ್ದಾರೆ. ಬಂಟ್ಸ್ ಹಾಸ್ಟೆಲ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರಿಗೆ ಪ್ರಶಸ್ತಿ ಪ್ರದಾನ ಹಾಗೂ ಸನ್ಮಾನ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದಲ್ಲಿ ಮೋಹನ್‌ದೇವ್ ಆಳ್ವ ಮತ್ತು ಡಾ. ಎಂ.ಕೆ. ಶೈಲಜಾ ಆಳ್ವ ಉಪಸ್ಥಿತರಿರಲಿದ್ದಾರೆ.

## ಎಸ್.ಟಿ. ವಿದ್ಯಾರ್ಥಿಗಳಿಗೆ 6ನೇ ತರಗತಿ ಪ್ರವೇಶಾವಕಾಶ : ಅರ್ಜಿ ಆಹ್ವಾನ

ಮಂಗಳೂರು – 2026-27ನೇ ಸಾಲಿಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರತಿಭಾವಂತ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಲ್ಲಿ ದಾಖಲಿಸಲು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 4 ಕೊನೆಯ ದಿನ. ಹೆಚ್ಚಿನ ಮಾಹಿತಿಗೆ ನಗರದ ಕೊಟ್ಟಾರದ ಅಬ್ಬಕ್ಕ ನಗರದಲ್ಲಿರುವ ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿ ಕಚೇರಿ ದೂರವಾಣಿ ಸಂಖ್ಯೆ : 0824-2451269 ಸಂಪರ್ಕಿಸಬಹುದು ಎಂದು ಯೋಜನಾ ಸಮನ್ವಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೇಯ್ಟ್ ಲಿಫ್ಟಿಂಗ್, ಅಥ್ಲೆಟಿಕ್ಸ್ ಉಚಿತ ಬೇಸಿಗೆ ತರಬೇತಿ ಶಿಬಿರ

ಮಂಗಳೂರು – ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ ವತಿಯಿಂದ ಅಥ್ಲೆಟಿಕ್ಸ್ ಹಾಗೂ ವೇಯ್ಟ್ ಲಿಫ್ಟಿಂಗ್ ಕ್ರೀಡೆಗಳಲ್ಲಿ ಆಸಕ್ತಿ ಹೊಂದಿರುವ ಕ್ರೀಡಾಪಟುಗಳಿಗೆ ಉಚಿತ ಬೇಸಿಗೆ ತರಬೇತಿ ಶಿಬಿರಗಳನ್ನು ಏರ್ಪಡಿಸಲಾಗಿದೆ. ಹೆಚ್ಚಿನ ಮಾಹಿತಿಗೆ 70191 44302, 8494830078 ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯೂರಿಯಾ ರಸಗೊಬ್ಬರ ಖರೀದಿಗೆ ಎಫ್‌ಐಡಿ ಸಂಖ್ಯೆ ಕಡ್ಡಾಯ

ಶಿವಮೊಗ್ಗ : ಜಿಲ್ಲೆಯ ರೈತರು ಯೂರಿಯಾ ರಸಗೊಬ್ಬರವನ್ನು ಖರೀದಿಸಲು ಇನ್ನು ಮುಂದೆ ಫಾರ್ಮರ್ ಐಡಿ (ಎಫ್‌ಐಡಿ) ಸಂಖ್ಯೆಯನ್ನು ಹೊಂದಿರುವುದು ಕಡ್ಡಾಯವಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಕಿರಣ್ ಕುಮಾರ್ ತಿಳಿಸಿದ್ದಾರೆ. 2026-27ನೇ ಸಾಲಿನ ಮುಂಗಾರು ಹಂಗಾಮಿನಿಂದ ಈ ಹೊಸ ನಿಯಮ ಜಾರಿಗೆ ಬರಲಿದ್ದು, ರಸಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆ ತರಲು ಮತ್ತು ಕಾಳಸಂತೆಯಲ್ಲಿ ಗೊಬ್ಬರ ಮಾರಾಟವಾಗುವುದನ್ನು ತಡೆಗಟ್ಟಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

## ರಂಗಾಯಣದಿಂದ 'ಚಿಣ್ಣರ ಸಿಹಿಮೊಗೆ' ಮಕ್ಕಳ ಬೇಸಿಗೆ ಶಿಬಿರ

ಶಿವಮೊಗ್ಗ : ಶಿವಮೊಗ್ಗ ರಂಗಾಯಣವು ಪ್ರತಿ ವರ್ಷದಂತೆ ಈ ಬಾರಿಯೂ ಮಕ್ಕಳಿಗಾಗಿ ರಂಗತರಬೇತಿ ಶಿಬಿರ 'ಚಿಣ್ಣರ ಸಿಹಿಮೊಗೆ-2026' ಎಂಬ ಹೆಸರಿನಲ್ಲಿ ನಗರದ ಸುವರ್ಣ ಸಂಸ್ಕೃತಿ ಭವನದಲ್ಲಿ ಏಪ್ರಿಲ್ 14ರಿಂದ ಮೇ 03ರವರೆಗೆ ಬೆಳಿಗ್ಗೆ 10ರಿಂದ ಸಂಜೆ 05 ಗಂಟೆವರೆಗೆ ಬೇಸಿಗೆ ಶಿಬಿರವನ್ನು ಏರ್ಪಡಿಸಿದೆ. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ರಂಗಾಯಣ ಕಚೇರಿ, ಸುವರ್ಣ ಸಂಸ್ಕೃತಿ ಭವನ, ಹೆಲಿಪ್ಯಾಡ್ ಹತ್ತಿರ, ಅಶೋಕನಗರ, ಶಿವಮೊಗ್ಗ ಇವರನ್ನು ಅಥವಾ ಕಚೇರಿ ದೂರವಾಣಿ ಸಂಖ್ಯೆ 08182-256353ನ್ನು ಸಂಪರ್ಕಿಸಬಹುದಾಗಿದೆ ಎಂದು ರಂಗಾಯಣ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.

## ಪ್ರತಿಷ್ಠಿತ ಶಾಲೆಗೆ ದಾಖಲು : ಅರ್ಜಿ ಆಹ್ವಾನ

ಮಡಿಕೇರಿ – 2026-27ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಪರಿಶಿಷ್ಟ ಜಾತಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಿಗೆ ದಾಖಲಿಸಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 9480843037, 9480843037, 9480843157 ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಗ್ಯಾಸ್ ಸಿಲಿಂಡರ್ ಓಟಿಪಿಯಿಂದ ಬದುಕಿ ಬಂದ ವೃದ್ಧ!



ಉಡುಪಿ : ಗ್ಯಾಸ್ ಸಿಲಿಂಡರ್ ಓಟಿಪಿಯಿಂದ ವೃದ್ಧ ಜೀವವೊಂದು ದೊಡ್ಡ ಅಪಾಯದಿಂದ ಬದುಕಿಬಂದಿದೆ. ಆಯತಪ್ಪಿ ಬಾವಿಗೆ ಬಿದ್ದಿದ್ದ ವ್ಯಕ್ತಿಯನ್ನು ಗ್ಯಾಸ್ ಸಿಲಿಂಡರ್ ಓಟಿಪಿಯಿಂದ ರಕ್ಷಣೆ ಮಾಡಲಾಗಿದೆ. ಈ ಅಪರೂಪದ ಘಟನೆಗೆ ಉಡುಪಿ ಜಿಲ್ಲೆ ಸಾಕ್ಷಿ ಆಗಿದೆ. ಸದ್ಯ ರಕ್ಷಣೆಗೊಳಗಾದ ವೃದ್ಧ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರು ಕೂಡ ಆಯತಪ್ಪಿ ಸುಮಾರು 15ರಿಂದ 20 ಅಡಿ ಆಳದ ಬಾವಿಗೆ ಬಿದ್ದಿದ್ದಾರೆ. ಕಾರ್ಯಚರಣೆ ನಡೆಸಿದ ಅಗ್ನಿಶಾಮಕ ಸಿಬ್ಬಂದಿ, ಶ್ರೀನಿವಾಸ್ ಆಚಾರ್ಯರನ್ನು ಬಾವಿಯಿಂದ ಮೇಲಕ್ಕೆ ಎತ್ತುವ ಮೂಲಕ ರಕ್ಷಣೆ ಮಾಡಿದ್ದಾರೆ.

## ಬಂದರು ಪ್ರಾಧಿಕಾರದಲ್ಲಿ ರಾಷ್ಟ್ರೀಯ ಸಮುದ್ರ ದಿನಾಚರಣೆ



ಮಂಗಳೂರು : ನವ ಮಂಗಳೂರು ಬಂದರು ಪ್ರಾಧಿಕಾರವು 63ನೇ ರಾಷ್ಟ್ರೀಯ ಸಮುದ್ರ ದಿನಾಚರಣೆಯನ್ನು ಅತ್ಯಂತ ಸಡಗರದಿಂದ ಆಚರಿಸಿತು. ಇದರೊಂದಿಗೆ ಕಳೆದ ಒಂದು ವಾರದಿಂದ ನಡೆಯುತ್ತಿದ್ದ ಮರ್ಚೆಂಟ್ ನೇವಿ ವಾರಕ್ಕೆ ಭವ್ಯ ತೆರೆಬಿದ್ದಿದೆ. ಭಾರತದ ಸಮುದ್ರ ಪರಂಪರೆಯನ್ನು ಸ್ಮರಿಸುವ ಮತ್ತು ಜಾಗತಿಕ ವ್ಯಾಪಾರಕ್ಕೆ ಹಗಲಿರುಳು ಶ್ರಮಿಸುವ ನಾವಿಕರ ಅಮೂಲ್ಯ ಸೇವೆಯನ್ನು ಗೌರವಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಸಂಜೆ ಪಣಂಬೂರಿನ ಜೆಎನ್‌ಸಿ ಹಾಲ್‌ನಲ್ಲಿ ನಡೆದ ಮರ್ಚೆಂಟ್ ನೇವಿ ವಾರದ ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ಶ್ರೀಮತಿ ಎಸ್. ಶಾಂತಿ ಅವರು ವಹಿಸಿದ್ದರು.

## ಮೌಲೇಜ್ ತಯಾರಿಕೆ ಕುರಿತು ರಾಷ್ಟ್ರಮಟ್ಟದ ಕಾರ್ಯಾಗಾರ





ಮಂಗಳೂರು : ಫಾದರ್ ಮುಲ್ಲರ್ ನರ್ಸಿಂಗ್ ಕಾಲೇಜು ತುಂಬೆ ಹಾಗೂ ಫಾದರ್ ಮುಲ್ಲರ್ ಸಿಮ್ಯುಲೇಶನ್ ಮತ್ತು ಸ್ಕಿಲ್ ಸೆಂಟರ್ ಸಹಯೋಗದೊಂದಿಗೆ, "ಕ್ರಾಫ್ಟಿಂಗ್ ಕ್ಲಿನಿಕಲ್ ರಿಯಲಿಸಂ" ಎಂಬ ಶೀರ್ಷಿಕೆಯಡಿ ಕಡಿಮೆ ವೆಚ್ಚದ ಮೌಲೇಜ್ ತಯಾರಿಕೆಯ ಕುರಿತಾದ ರಾಷ್ಟ್ರಮಟ್ಟದ ಕಾರ್ಯಾಗಾರವು ಕಂಕನಾಡಿಯ ಫಾದರ್ ಮುಲ್ಲರ್ ಕನ್ವೆನ್ಷನ್ ಸೆಂಟರ್‌ನ ಮುಲ್ಲರ್ ಮಿನಿಹಾಲ್‌ನಲ್ಲಿ ಉದ್ಘಾಟನೆಗೊಳ್ಳಲಿದೆ. ಪುದುಚೇರಿಯ ಶ್ರೀ ಬಾಲಾಜಿ ವಿದ್ಯಾಪೀಠದ ವೈದ್ಯಕೀಯ ಸಿಮ್ಯುಲೇಶನ್ ಕೇಂದ್ರದ ನಿರ್ದೇಶಕ ಡಾ. ದಿನಕರ್ ಪೈ ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನಾ ಭಾಷಣ ಮಾಡಲಿದ್ದಾರೆ. ರಿಷಿಕೇಶದ ಏಮ್ಸ್‌ನ ವೈದ್ಯಕೀಯ ಸಿಮ್ಯುಲೇಶನ್ ಮತ್ತು ಕೌಶಲ್ಯಗಳ ಸುಧಾರಿತ ಕೇಂದ್ರದ ಉಸ್ತುವಾರಿ ಶ್ರೀ ಹೇಮಂತ್ ಅವರು ಸಿಮ್ಯುಲೇಶನ್ ನಾವೀನ್ಯತೆಗಳ ಬಗ್ಗೆ ವಿಶೇಷ ಉಪನ್ಯಾಸ ನೀಡಲಿದ್ದಾರೆ.

## ಶ್ರೀ ವೈದ್ಯನಾಥ ಆಟೋ ಪಾರ್ಕ್‌ನ ಮೇಲ್ಛಾವಣಿ ಲೋಕಾರ್ಪಣೆ





ಮಂಗಳೂರು: ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ 54ನೇ ಜಪ್ಪಿನಮೊಗರು ವಾರ್ಡಿನ ಶ್ರೀ ವೈದ್ಯನಾಥ ಆಟೋ ಪಾರ್ಕ್‌ಗೆ ನೂತನವಾಗಿ ಅಳವಡಿಸಲಾದ ಮೇಲ್ಛಾವಣಿ ಹಾಗೂ ಇಂಟರ್‌ಲಾಕ್ ವ್ಯವಸ್ಥೆಯನ್ನು ಮಂಗಳೂರು ದಕ್ಷಿಣ ಶಾಸಕ ವೇದವ್ಯಾಸ ಕಾಮತ್ ಅವರು ಉದ್ಘಾಟಿಸಿದರು. ಬಳಿಕ ಮಾತನಾಡಿದ ಶಾಸಕರು, "ಆಟೋ ಚಾಲಕರು ಶ್ರಮಿಕ ವರ್ಗದವರಾಗಿದ್ದು, ತಮ್ಮ ಜೀವನೋಪಾಯದ ಜೊತೆಗೆ ಪ್ರಯಾಣಿಕರ ಹಿತದೃಷ್ಟಿಯಿಂದಲೂ ಶ್ರಮಿಸುತ್ತಾರೆ. ಸದ್ಯ ವಿಪರೀತ ಬಿಸಿಲಿರುವ ಕಾರಣ, ಆಟೋರಿಕ್ಷಾಗಳನ್ನು ಬಿಡುವಿನ ವೇಳೆ ನೆರಳಿನಲ್ಲಿ ನಿಲ್ಲಿಸಲು ಸೂಕ್ತ ವ್ಯವಸ್ಥೆ ಬೇಕೆಂಬ ಅವರ ಬೇಡಿಕೆಯಿತ್ತು. ಈ ಹಿನ್ನೆಲೆಯಲ್ಲಿ ಇಲ್ಲಿ ಸುಸಜ್ಜಿತ ಮೇಲ್ಛಾವಣಿ ಹಾಗೂ ಇಂಟರ್‌ಲಾಕ್ ಅಳವಡಿಸಲಾಗಿದೆ. ಚಾಲಕ ಬಂಧುಗಳಿಗೆ ಈ ಸೌಲಭ್ಯ ಅನುಕೂಲಕರವಾದರೆ ನಮಗೆ ತೃಪ್ತಿ ನೀಡುತ್ತದೆ" ಎಂದರು.

## ರಾಜ್ಯಮಟ್ಟದ ವ್ಯಕ್ತಿತ್ವ ವಿಕಸನ ಶಿಬಿರ 'ಯುರೇಕಾ – 2026'




ಪುತ್ತೂರು : ಪುತ್ತೂರಿನ ನೆಹರು ನಗರದಲ್ಲಿರುವ ಪ್ರಸಿದ್ಧ ವಿವೇಕಾನಂದ ಪದವಿಪೂರ್ವ ಕಾಲೇಜಿನ ಆಶ್ರಯದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆ ಮುಗಿಸಿದ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿರುವ ಆರು ದಿನಗಳ ರಾಜ್ಯಮಟ್ಟದ ವ್ಯಕ್ತಿತ್ವ ವಿಕಸನ ಶಿಬಿರ "ಯುರೇಕಾ-2026" ನಡೆಯಲಿದೆ. ನಡೆಯಲಿರುವ ಉದ್ಘಾಟನಾ ಕಾರ್ಯಕ್ರಮದಲ್ಲಿ ಪುತ್ತೂರಿನ ವಿವೇಕಾನಂದ ಕೇಂದ್ರೀಯ ವಿದ್ಯಾಲಯದ ಸಂಚಾಲಕರಾದ ಭರತ್ ಪೈ ಅವರು ಶಿಬಿರವನ್ನು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷ ರವೀಂದ್ರ ಪಿ. ವಹಿಸಲಿದ್ದು, ಪ್ರಾಂಶುಪಾಲರಾದ ದೇವಿಚರಣ್ ರೈ ಎಂ ಅವರು ಉಪಸ್ಥಿತರಿರಲಿದ್ದಾರೆ. ಶಿಬಿರಾರ್ಥಿಗಳಿಗೆ ಕಾಲೇಜಿನ ವತಿಯಿಂದ ವಸತಿ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ಬೆಟ್ಟಂಪಾಡಿ, ಪೆರ್ಲ ಹಾಗೂ ಉಪ್ಪಿನಂಗಡಿಯಿಂದ ಕಾಲೇಜು ಬಸ್ ಸೌಲಭ್ಯ ಒದಗಿಸಲಾಗಿದೆ.

## ಎಸ್‌ಸಿಡಿಸಿಸಿ ಬ್ಯಾಂಕ್‌ಗೆ 131 ಕೋಟಿ ನಿವ್ವಳ ಲಾಭ




ಮಂಗಳೂರು: ಸಹಕಾರಿ ಬ್ಯಾಂಕಿಂಗ್ ಕ್ಷೇತ್ರದಲ್ಲಿ 112 ವರ್ಷಗಳ ಸುದೀರ್ಘ ಇತಿಹಾಸವಿರುವ ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ 2025-26ನೇ ಆರ್ಥಿಕ ವರ್ಷದಲ್ಲಿ ಅತ್ಯಂತ ಯಶಸ್ವಿ ಪ್ರಗತಿ ದಾಖಲಿಸಿದೆ ಎಂದು ಬ್ಯಾಂಕಿನ ಅಧ್ಯಕ್ಷರಾದ ಡಾ. ಎಂ.ಎನ್. ರಾಜೇಂದ್ರ ಕುಮಾರ್ ಹೇಳಿದ್ದಾರೆ. ನಗರದ ಬ್ಯಾಂಕ್‌ನ ಪ್ರಧಾನ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಅವರು, ಬ್ಯಾಂಕ್ ಈ ಸಾಲಿನಲ್ಲಿ ಒಟ್ಟು 20,226.19 ಕೋಟಿಗಳ ದಾಖಲೆಯ ವ್ಯವಹಾರವನ್ನು ನಡೆಸಿದ್ದು, ಕಳೆದ ವರ್ಷಕ್ಕೆ ಹೋಲಿಸಿದರೆ ಶೇ.16.47 ರಷ್ಟು ಅಭಿವೃದ್ಧಿ ಸಾಧಿಸಿದೆ. ಈ ಮೂಲಕ 131.14 ಕೋಟಿ ನಿವ್ವಳ ಲಾಭಗಳಿಸಿ ರಾಜ್ಯದ ಸಹಕಾರಿ ರಂಗದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿದೆ ಎಂದರು.

## ಮಂಗಳೂರಿನಲ್ಲಿ ಪ್ರಥಮ ವಿಶ್ವ ಕೊಂಕಣಿ ಸಂಗೀತ ಮಹಾ ಸಮಾವೇಶ

ಮಂಗಳೂರು : ತನ್ನ ಅಸ್ತಿತ್ವದ 40ನೇ ವರ್ಷಾಚರಣೆಯ ಸಂಭ್ರಮದಲ್ಲಿರುವ ಕೊಂಕಣಿಯ ಪ್ರತಿಷ್ಠಿತ ಸಾಂಸ್ಕೃತಿಕ ಸಂಘಟನೆ 'ಮಾಂಡ್ ಸೊಭಾಣ್', ಕೊಂಕಣಿ ಸಾಂಸ್ಕೃತಿಕ ಲೋಕದ ಇತಿಹಾಸದಲ್ಲೇ ಮೈಲಿಗಲ್ಲಾಗಲಿರುವ 'ಪ್ರಥಮ ವಿಶ್ವ ಕೊಂಕಣಿ ಸಂಗೀತ ಮಹಾ ಸಮಾವೇಶ'ವನ್ನು ಆಯೋಜಿಸಲು ಸಿದ್ಧತೆ ನಡೆಸಿದೆ. ನವೆಂಬರ್ 03ರಿಂದ 15 ರವರೆಗೆ ಮಂಗಳೂರಿನಲ್ಲಿ ನಡೆಯಲಿರುವ ಈ ಬೃಹತ್ ಸಮಾವೇಶದ ಮುಹೂರ್ತ ಹಾಗೂ ಲಾಂಛನ ಬಿಡುಗಡೆ ಕಾರ್ಯಕ್ರಮವು ಇದೇ ಶುಕ್ರವಾರ, ಏಪ್ರಿಲ್ 10ರಂದು ಸಂಜೆ 4:00 ಗಂಟೆಗೆ ಶಕ್ತಿನಗರದ ಕಲಾಂಗಣದಲ್ಲಿ ಅದ್ದೂರಿಯಾಗಿ ನೆರವೇರಲಿದೆ ಎಂದು ಮಾಂಡ್ ಸೊಭಾಣ್ ಅಧ್ಯಕ್ಷರಾದ ಲುವಿ ಜೆ. ಪಿಂಟೊ, ತಿಳಿಸಿದರು.

## ಚಿಂತನಾ ಶಕ್ತಿ ಮತ್ತು ಸ್ಮರಣಶಕ್ತಿ ಉಳಿಸಿಕೊಳ್ಳಿ : ಅತುಲ್ ಭಟ್




ಮೂಡುಬಿದಿರೆ: ಇಂದಿನ ದಿನಗಳಲ್ಲಿ ನಮ್ಮ ಸುತ್ತಲಿನ ಪರಿಸರದಲ್ಲೇ ಅಪಾರ ಮಾಹಿತಿಯಿದ್ದು, ಅದನ್ನು ಅರಿಯಲು ಸದಾ ಮೊಬೈಲ್ ಅಥವಾ ಇಂಟರ್‌ನೆಟ್ ಅವಶ್ಯಕವಿಲ್ಲ. ವಿದ್ಯಾರ್ಥಿಗಳು ತಮ್ಮ ಸುತ್ತಲಿನ ವಸ್ತುಗಳನ್ನು ಸೂಕ್ಷ್ಮವಾಗಿ ಗಮನಿಸುವ ಮೂಲಕವೇ ಬಹಳಷ್ಟು ವಿಷಯಗಳನ್ನು ಕಲಿಯಬಹುದು ಎಂದು ಮಾಹೆಯ ಸೌರ ಭೌತಶಾಸ್ತ್ರ ಸಂಶೋಧಕ ಅತುಲ್ ಭಟ್ ಅಭಿಪ್ರಾಯಪಟ್ಟರು. ಮೂಡುಬಿದಿರೆಯ ಆಳ್ವಾಸ್ ಶಾಲೆಯು ಆಯೋಜಿಸಿದ್ದ 'ಖಗೋಳಶಾಸ್ತ್ರ ಬೇಸಿಗೆ ಶಿಬಿರ 2026'ಅನ್ನು ಉದ್ಘಾಟಿಸಿ ಅವರು ಮಾತನಾಡಿದರು. ತಂತ್ರಜ್ಞಾನದ ಅತಿಯಾದ ಬಳಕೆಯಿಂದಾಗಿ ವಿದ್ಯಾರ್ಥಿಗಳು ತಮ್ಮ ಸಹಜ ಚಿಂತನಾ ಶಕ್ತಿ ಮತ್ತು ನೆನಪಿನ ಸಾಮರ್ಥ್ಯವನ್ನು ಕಳೆದುಕೊಳ್ಳಬಾರದು ಎಂದು ಅವರು ಎಚ್ಚರಿಸಿದರು.

## ತಡೆಗೋಡೆ ನಿರ್ಮಾಣ ಕಾಮಗಾರಿಗೆ ಡಾ. ಭರತ್ ಶೆಟ್ಟಿ ಚಾಲನೆ



ಮಂಗಳೂರು: ಸುಭಾಷಿತ ನಗರದ 2ನೇ ಕ್ರಾಸ್ ಬಳಿಯ ಕಂಬಳ ರಸ್ತೆಯಲ್ಲಿ ಸುಮಾರು 25 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ನೂತನ ತಡೆಗೋಡೆ ಕಾಮಗಾರಿಗೆ ಮಂಗಳೂರು ಉತ್ತರ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಡಾ. ವೈ. ಭರತ್ ಶೆಟ್ಟಿ ಅಧಿಕೃತವಾಗಿ ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಸ್ಥಳೀಯರ ಬೇಡಿಕೆಯಾಗಿದ್ದ ಈ ತಡೆಗೋಡೆ ನಿರ್ಮಾಣದಿಂದ ಮಳೆಗಾಲದಲ್ಲಿ ಎದುರಾಗುವ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಸಿಗಲಿದೆ ಎಂದರು.

## ಎಂಸಿಸಿ ಬ್ಯಾಂಕ್ 25 ಶಾಖೆಗಳ ವಿಸ್ತರಣೆಗೆ ಯೋಜನೆ



ಮಂಗಳೂರು: ಶತಮಾನೋತ್ತರ ಇತಿಹಾಸವಿರುವ ಎಂಸಿಸಿ ಬ್ಯಾಂಕ್ 2025-26ನೇ ಹಣಕಾಸು ವರ್ಷದಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದ್ದು, 13 ಕೋಟಿ ರೂಪಾಯಿಗಳ ತೆರಿಗೆ ಪೂರ್ವ ಲಾಭವನ್ನು ದಾಖಲಿಸುವ ಮೂಲಕ ತನ್ನ 114ನೇ ವರ್ಷದ ಸೇವೆಯನ್ನು ಸ್ಮರಣೀಯವಾಗಿಸಿದೆ ಎಂದು ಬ್ಯಾಂಕಿನ ಅಧ್ಯಕ್ಷ ಅನಿಲ್ ಲೋಬೊ ತಿಳಿಸಿದರು. ಮಂಗಳೂರಿನ ಹಂಪನಕಟ್ಟೆಯಲ್ಲಿರುವ ಬ್ಯಾಂಕಿನ ಆಡಳಿತ ಕಚೇರಿಯಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಮಾಹಿತಿ ನೀಡಿದ ಅವರು, ಬ್ಯಾಂಕಿನ ಒಟ್ಟು ವ್ಯವಹಾರವು 1,525 ಕೋಟಿ ರೂಪಾಯಿಗಳಿಗೆ ತಲುಪಿದ್ದು, ಶೇಕಡಾ 23ರಷ್ಟು ವೃದ್ಧಿ ಸಾಧಿಸಿದೆ. ಕಳೆದ ಏಳೂವರೆ ವರ್ಷಗಳಲ್ಲಿ ಬ್ಯಾಂಕಿನ ವಹಿವಾಟು ಮೂರು ಪಟ್ಟು ಹೆಚ್ಚಿರುವುದು ಬ್ಯಾಂಕಿನ ಇತಿಹಾಸದಲ್ಲೇ ಹೊಸ ದಾಖಲೆಯಾಗಿದೆ ಎಂದರು.

## ರಾಮ-ಹನುಮರ ಮಿಲನಕ್ಕೆ ಸಾಕ್ಷಿಯಾಗಲಿರುವ ಹನುಮಗಿರಿ



ಪುತ್ತೂರು: ದಕ್ಷಿಣ ಕನ್ನಡ ಜಿಲ್ಲೆಯ ಹೆಸರಾಂತ ಧಾರ್ಮಿಕ ಮತ್ತು ಪ್ರವಾಸಿ ತಾಣವಾದ ಹನುಮಗಿರಿಯಲ್ಲಿ ಪಂಚಮುಖಿ ಆಂಜನೇಯ ಸ್ವಾಮಿ ಹಾಗೂ ಶ್ರೀರಾಮಚಂದ್ರನ ದೇವಸ್ಥಾನದ ಪುನರುತ್ಥಾನ ಮತ್ತು ಬ್ರಹ್ಮಕಲಶೋತ್ಸವದ ಸಂಭ್ರಮ ಮುಗಿಲು ಮುಟ್ಟಿದೆ. ಈ ಐತಿಹಾಸಿಕ ಸಂದರ್ಭದ ಅಂಗವಾಗಿ ಅಯೋಧ್ಯೆ ಯ ಬಾಲರಾಮನ ಮಂದಿರದಿಂದ ತರಲಾದ ಪವಿತ್ರ 'ರಾಮಜ್ಯೋತಿ'ಯು ಹನುಮಗಿರಿ ಕ್ಷೇತ್ರಕ್ಕೆ ಭವ್ಯವಾಗಿ ಆಗಮಿಸಿದ್ದು, ಭಕ್ತರಲ್ಲಿ ಹೊಸ ಸಂಚಲನ ಮೂಡಿಸಿದೆ ಎಂದು ಬ್ರಹ್ಮಕಲಶೋತ್ಸವ ಸಮಿತಿಯ ಅಧ್ಯಕ್ಷರಾದ ನಳಿನ್ ಕುಮಾರ್ ಕಟೀಲು ತಿಳಿಸಿದರು. ಏಪ್ರಿಲ್ 9 ರಿಂದ ಬ್ರಹ್ಮಕಲಶೋತ್ಸವದ ಧಾರ್ಮಿಕ ವಿಧಿವಿಧಾನಗಳು ಆರಂಭವಾಗಲಿದ್ದು, 12ನೇ ತಾರೀಖಿನಂದು ಬ್ರಹ್ಮಕಲಶಭಿಷೇಕದೊಂದಿಗೆ ಪರಿಸಮಾಪ್ತಿ ಆಗಲಿದೆ ಎಂದರು.

## ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ ನಟ ರಿಷಬ್ ಶೆಟ್ಟಿ ಭೇಟಿ



ಧರ್ಮಸ್ಥಳ: ಕನ್ನಡ ಚಿತ್ರರಂಗದ ಖ್ಯಾತ ನಟ ಹಾಗೂ ನಿರ್ದೇಶಕ, 'ಕಾಂತಾರ' ಖ್ಯಾತಿಯ 'ಡಿವೈನ್ ಸ್ಟಾರ್' ರಿಷಬ್ ಶೆಟ್ಟಿ ಅವರು ಕುಟುಂಬ ಸಮೇತರಾಗಿ ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿ ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆದರು. ಕ್ಷೇತ್ರಕ್ಕೆ ಆಗಮಿಸಿದ ರಿಷಬ್ ಶೆಟ್ಟಿ ಮತ್ತು ಅವರ ಪತ್ನಿ ಪ್ರಗತಿ ಶೆಟ್ಟಿ ಅವರು ಮಂಜುನಾಥ ಸ್ವಾಮಿಗೆ ವಿಶೇಷ ರಂಗಪೂಜೆ ಸೇವೆಯನ್ನು ನೆರವೇರಿಸಿ, ದೇವರ ಆಶೀರ್ವಾದ ಪಡೆದರು. ನಂತರ ಧರ್ಮಸ್ಥಳದ ಧರ್ಮಾಧಿಕಾರಿಗಳಾದ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಹೆಗ್ಗಡೆಯವರು ನಟ ರಿಷಬ್ ಶೆಟ್ಟಿ ಅವರಿಗೆ ಶುಭ ಹಾರೈಸಿದರು.




## 'ಸಂಕೀರ್ತನ' ಭಕ್ತಿಪ್ರಧಾನ ಚಿತ್ರ ಏಪ್ರಿಲ್ 17ಕ್ಕೆ ತೆರೆಗೆ

ಕೆ. ಪದ್ಮಕಲಾ ಗುಂಡೂರಾವ್ ಹಾಗು ಸ್ನೇಹಿತರು ನಿರ್ಮಾಣ ಮಾಡಿರುವ ಡಿ.ಎಸ್ ಮಂಜುನಾಥ್ (ಕಲಾ ಗಂಗೋತ್ರಿ ಮಂಜು) ನಿರ್ದೇಶಿಸಿರುವ ಹಾಗೂ ಜೆ.ಎಂ.ಪ್ರಹ್ಲಾದ್ ಕಥೆ, ಚಿತ್ರಕಥೆ, ಸಂಭಾಷಣೆ ಬರೆದಿರುವ 'ಸಂಕೀರ್ತನ' ಚಿತ್ರದಲ್ಲಿ ವಿಜಯನಗರ ಸಾಮ್ರಾಜ್ಯದಲ್ಲಿದ್ದ ಶ್ರೇಷ್ಠ ಸಂತರ ಹಾಗೂ ಹರಿದಾಸರ ಬಗೆಗಿನ ಕಥಾಹಂದರವಿದೆ. ಭಕ್ತಿಪ್ರಧಾನ ಈ ಚಿತ್ರ ಏಪ್ರಿಲ್ 17ಕ್ಕೆ ತೆರೆಗೆ ಬರುತ್ತಿದೆ. ಈ ಚಿತ್ರದ ಕುರಿತು ಹೆಚ್ಚಿನ ಮಾಹಿತಿಯನ್ನು ಚಿತ್ರತಂಡದ ಸದಸ್ಯರು ನೀಡಿದರು. ಜೆ.ಎಂ ಪ್ರಹ್ಲಾದ್ ಮಾತನಾಡಿ, ಹದಿನೈದು ವರ್ಷದ ಹಿಂದೆ ಹೆಳವನಕಟ್ಟೆ ಗಿರಿಯಮ್ಮ ಧಾರಾವಾಹಿಗಾಗಿ ಬರೆದಿದ್ದೆ. ಆ ಧಾರಾವಾಹಿ ಜನರ ಮೆಚ್ಚುಗೆ ಪಡೆದುಕೊಂಡಿತ್ತು. ಆಗ ನನಗೆ ಜನರಿಗೆ ದಾಸ ಸಾಹಿತ್ಯದ ಬಗ್ಗೆ ಒಲವಿದೆ ಎನ್ನುವುದು ತಿಳಿಯಿತು. ದಾಸ ಸಾಹಿತ್ಯದ ಬಗ್ಗೆ ನಟಿ ಪದ್ಮ ಕಲಾ ಅವರಿಗೆ ಒಲವಿತ್ತು. ನಾವೆಲ್ಲಾ ಸೇರಿ ವಾಹಿನಿಯೊಂದಕ್ಕೆ ಧಾರಾವಾಹಿ ಮಾಡಲು ಚರ್ಚೆ ಕೂಡ ನಡೆಸಿದ್ದೆವು. ಆದರೆ ಕಾರಣಾಂತರದಿಂದ ಅದು ಆಗಲಿಲ್ಲ. ನಂತರ ಸಿನಿಮಾ ಮಾಡಲು ನಿರ್ಧರಿಸಿದೆವು. ಇದು ಹದಿನಾರನೇ ಶತಮಾನದಲ್ಲಿ ವಿಜಯನಗರ ಸಾಮ್ರಾಜ್ಯದಲ್ಲಿದ್ದ ಸಂತರ ಹಾಗೂ ಹರಿದಾಸರನ್ನು ಕುರಿತಾದ ಚಿತ್ರ. ಶ್ರೀಪಾದರಾಜರು, ವ್ಯಾಸರಾಜರು, ವಾದಿರಾಜರು, ವೈಕುಂಠದಾಸರು, ಪುರಂದರದಾಸರು, ಕನಕದಾಸರ ಮೊದಲಾದ ಜ್ಞಾನಿವರೇಣ್ಯರ ಕುರಿತು ತಿಳಿಸುವ ಪ್ರಯತ್ನವನ್ನು "ಸಂಕೀರ್ತನ" ಚಿತ್ರದಲ್ಲಿ ಮಾಡಿದ್ದೇವೆ. ನನಗೆ ಈ ಚಿತ್ರದ ಕಥೆ ಬರೆಯಲು ಬೋಳೂರು ಕೇಶವದಾಸರ "ಕರ್ನಾಟಕ ಭಕ್ತ ವಿಜಯ" ಪುಸ್ತಕ ಸಾಕಷ್ಟು ಸಹಕಾರಿಯಾಯಿತು. ನವರಾತ್ರಿಗೆ ಹಂಪಿಗೆ ಬರುವ ವ್ಯಾಪಾರಿಗಳಿಂದ ಈ ಚಿತ್ರದ ಕಥೆ ಪ್ರಾರಂಭವಾಗುತ್ತದೆ. ಚಿತ್ರದಲ್ಲಿ 15 ಹಾಡುಗಳಿದ್ದು, ಪ್ರವೀಣ್ ಡಿ. ರಾವ್ ಸಂಗೀತ ನೀಡಿದ್ದಾರೆ ಎಂದು ಹೇಳಿದರು. ನಿರ್ದೇಶಕರು ಮಾತನಾಡಿ ಹೆಚ್ಚಿನ ಭಾಗದ ಚಿತ್ರೀಕರಣ ಸೆಟ್‌ನಲ್ಲೇ ಆಗಿದೆ ಎಂದರು.



## ಸುಜಯ್ ಶಾಸ್ತ್ರಿ ನಿರ್ದೇಶನದ ಚಿತ್ರ ಏಪ್ರಿಲ್ 17 ರಂದು ಬಿಡುಗಡೆ

ಸುಜಯ್ ಶಾಸ್ತ್ರಿ ನಿರ್ದೇಶನದ, ಗೋಕುಲ ಎಂಟರ್ಟೈನರ್ಸ್ ಲಾಂಛನದಲ್ಲಿ ಗೋವಿಂದರಾಜು ಅವರು ನಿರ್ಮಿಸಿರುವ ಹಾಗೂ ಚಂದನ್ ಶೆಟ್ಟಿ ನಾಯಕನಾಗಿ ನಟಿಸಿರುವ "ಎಲ್ರ ಕಾಲೆಳೆಯುತ್ತೆ ಕಾಲ" ಚಿತ್ರದ ಟ್ರೇಲರ್ ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದೆ. 90ರ ಕಾಲಘಟ್ಟದ ರೆಟ್ರೊ ಶೈಲಿಯ ಕಥಾಹಂದರ ಹೊಂದಿರುವ ಈ ಚಿತ್ರದ ಟ್ರೇಲರ್‌ಗೆ ಚಂದನ್ ಶೆಟ್ಟಿ ಅಭಿಮಾನಿಗಳು ಫಿದಾ ಆಗಿದ್ದಾರೆ. ಏಪ್ರಿಲ್ 17ರಂದು ಚಿತ್ರ ಬಿಡುಗಡೆಯಾಗುತ್ತಿದ್ದು, ಚಿತ್ರ ನೋಡಲು ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ. ಟ್ರೇಲರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಚಿತ್ರದ ಬಗ್ಗೆ ಹೇಳಿದ್ದು ಹೀಗೆ. ಮೊದಲಿಗೆ ಕೇಳಿದನ್ನೆಲ್ಲಾ ಕೊಟ್ಟು ಒಂದೊಳ್ಳೆ ಚಿತ್ರ ಮಾಡಿಬರಲು ಸಹಕಾರ ನೀಡಿದ ನಿರ್ಮಾಪಕರಿಗೆ ಧನ್ಯವಾದ ಎಂದು ಮಾತನಾಡಿದ ನಿರ್ದೇಶಕ ಸುಜಯ್ ಶಾಸ್ತ್ರಿ, ರಿಯಾಲಿಟಿ ಶೋವೊಂದರಲ್ಲಿ ಚಂದನ್ ಶೆಟ್ಟಿ ಅವರನ್ನು ನೋಡಿದ ನನಗೆ ನಮ್ಮ ಕಥೆಗೆ ಇವರು ಸೂಕ್ತ ನಾಯಕ ಎಂದೆನಿಸಿತು. ನಂತರ ಚಂದನ್ ಶೆಟ್ಟಿ ಅವರಿಗೆ ನನ್ನ ಗೆಳೆಯ ರಾಜುಗುರು ಹೊಸಕೋಟೆ ಬರೆದಿರುವ ಈ ಚಿತ್ರದ ಕಥೆ ಹೇಳಿದ್ದೆವು. ಚಂದನ್ ಅಭಿನಯಿಸಲು ಒಪ್ಪಿದರು. ಚಿತ್ರೀಕರಣಕ್ಕೂ ಮುನ್ನ ಪೂರ್ವತಯಾರಿ ನೀಡಲಾಯಿತು. ಈ ಚಿತ್ರಕ್ಕಾಗಿ ಚಂದನ್ ಬಹಳ ಶ್ರಮ ಪಟ್ಟಿದ್ದಾರೆ. ನಾಯಕಿ ಅರ್ಚನಾ ಕೊಟ್ಟಿಗೆ ಸಹ ಉತ್ತಮವಾಗಿ ಅಭಿನಯಿಸಿದ್ದಾರೆ. ಎಲ್ಲರ ಮನಸ್ಸಿಗೂ ಹತ್ತಿರವಾಗುವಂತಹ ಕಥೆಯನ್ನು ರಾಜುಗುರು ಹೊಸಕೋಟೆ ಬರೆದಿದ್ದಾರೆ. ಪ್ರವೀಣ್-ಪ್ರದೀಪ್ ಸುಮಧುರ ಸಂಗೀತ ನೀಡಿದ್ದಾರೆ. ತಂತ್ರಜ್ಞರ ಕಾರ್ಯ ವೈಖರಿ ಹಾಗೂ ಸಹ ಕಲಾವಿದರ ನಟನೆ ಸೊಗಸಾಗಿದೆ. ಏಪ್ರಿಲ್ 17 ನಮ್ಮ ಚಿತ್ರ ತೆರೆಗೆ ಬರುತ್ತಿದೆ. ಎಲ್ಲರೂ ನೋಡಿ. ಪ್ರೋತ್ಸಾಹ ನೀಡಿ ಎಂದರು. ನಾನು ಈ ಚಿತ್ರದಲ್ಲಿ ನಟಿಸಲು ಮೊದಲ ಕಾರಣ ಕಥೆ. ಇಂತಹ ಚಿತ್ರವನ್ನು ಎಲ್ಲರೂ ನೋಡಿ ಗೆಲ್ಲಿಸಬೇಕು ಎಂದರು.



## 'NH 66'ನಲ್ಲಿ ಪ್ರಮೋದ್ ಶೆಟ್ಟಿ ಪ್ರಯಾಣ

ರಾಯ ಫಿಲಂಸ್ ಲಾಂಛನದಲ್ಲಿ ಮಂಜುನಾಥ್ ಟಿ.ಆರ್. ನಿರ್ಮಿಸಿ, ನಿರ್ದೇಶಿಸುತ್ತಿರುವ ಹಾಗೂ ಪ್ರಮೋದ್ ಶೆಟ್ಟಿ, ಶೃತಿ ಹರಿಹರನ್, ರಾಜೇಶ್ ನಟರಂಗ ಪ್ರಮುಖಪಾತ್ರದಲ್ಲಿ ನಟಿಸುತ್ತಿರುವ ನೂತನ ಚಿತ್ರದ ಮುಹೂರ್ತ ಹಾಗೂ ಶೀರ್ಷಿಕೆ ಅನಾವರಣ ಸಮಾರಂಭ ರಾಜರಾಜೇಶ್ವರಿ ನಗರದ ಶ್ರೀರಾಘವೇಂದ್ರ ಸ್ವಾಮಿ ಮಠದಲ್ಲಿ ನೆರವೇರಿತು. ವಿಭಿನ್ನ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ "NH 66" ಎಂದು ಹೆಸರಿಡಲಾಗಿದೆ. ನಟ ಉಗ್ರಂ ಮಂಜು ಸೇರಿದಂತೆ ಅನೇಕ ಗಣ್ಯರು ಹಾಗೂ ಚಿತ್ರತಂಡದ ಸದಸ್ಯರು ಮುಹೂರ್ತ ಸಮಾರಂಭದಲ್ಲಿ ಉಪಸ್ಥಿತರಿದ್ದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಾನು ಹಿರಿಯ ನಿರ್ದೇಶಕ ಭಾರ್ಗವ ಅವರ ಬಳಿ ನಿರ್ದೇಶನ ವಿಭಾಗದಲ್ಲಿ ಕೆಲಸ ಮಾಡಿದ್ದೆ. ನಂತರ ಕಾರಣಾಂತರದಿಂದ ವಿದೇಶಕ್ಕೆ ತೆರಳಿದೆ. ಅಲ್ಲಿಯೇ ಸ್ಕ್ರಿಪ್ಟ್ ರಚನೆ, ಚಿತ್ರಕಥೆ ಬಗ್ಗೆ ವಿಶೇಷ ಅಧ್ಯಯನ ನಡಿಸಿದೆ. ಈಗ ಇಲ್ಲಿಗೆ ಬಂದು ನನ್ನ ಮೊದಲ ನಿರ್ದೇಶನದ ಚಿತ್ರವನ್ನು ಆರಂಭಿಸಿದ್ದೇನೆ. ರಾಯರ ಪರಮಭಕ್ತನಾದ ನಾನು ಅವರ ಹೆಸರಿನಲ್ಲಿಯೇ ರಾಯ ಫಿಲಂಸ್ ಎಂಬ ಸಂಸ್ಥೆಯ ಮೂಲಕ ಈ ಚಿತ್ರವನ್ನು ನಿರ್ಮಾಣ ಕೂಡ ಮಾಡುತ್ತಿದ್ದೇನೆ. "NH 66" ಹೆಸರೆ ಹೇಳುವಂತೆ ಒಂದು ರೋಡ್ ಸ್ಟೋರಿ. ಥ್ರಿಲ್ಲರ್‌ಡ್ರಾಮ ಜಾನರ್‌ನ ಚಿತ್ರವೂ ಹೌದು. ಪ್ರಮೋದ್ ಶೆಟ್ಟಿ ಹಾಗೂ ಶೃತಿ ಹರಿಹರನ್ ಅವರಿಗೆ ಈ ಚಿತ್ರದ ಕಥೆ ಹೇಳಿದಾಗ, ಕಥೆ ಇಷ್ಟಪಟ್ಟು ಈ ಚಿತ್ರದಲ್ಲಿ ನಟಿಸಲು ಒಪ್ಪಿದರು. ರಾಜೇಶ್ ನಟರಂಗ ಕೂಡ ಪ್ರಮುಖಪಾತ್ರದಲ್ಲಿ ಅಭಿನಯಿಸಲಿದ್ದಾರೆ. ಇದು ಎರಡು ರಾತ್ರಿಗಳಲ್ಲಿ ಮಂಗಳೂರಿನಿಂದ ಗೋವಾಗೆ ಹೋಗುವ ಮಧ್ಯದಲ್ಲಿ ನಡೆಯುವ ಕಥೆಯಾಗಿದೆ.



## ಏಪ್ರಿಲ್ 10ರಂದು 'ಕಾಡ' ಚಿತ್ರ ತೆರೆಗೆ

ಹಿರಿತೆರೆ ಹಾಗೂ ಕಿರುತೆರಗಳಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ಜಯರಾಮ್ ಕಾರ್ತಿಕ್ (ಜೆ.ಕೆ) ನಾಯಕನಾಗಿ ನಟಿಸಿರುವ, ಅಮಿತ್ ಕುಮಾರ್ ಸಕ್ಸೇನ ನಿರ್ಮಾಣದ ಹಾಗೂ ರಾಜ್ಯ ಪ್ರಶಸ್ತಿ ವಿಜೇತ ನಟ ವಿಶೃತ್ ನಾಯಕ್ ನಿರ್ದೇಶಿಸಿರುವ ಸೈಕೊ ಥ್ರಿಲ್ಲರ್ ಜಾನರ್‌ನ "ಕಾಡ" ಚಿತ್ರ ಇದೇ ಏಪ್ರಿಲ್ 10ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಈ ಕುರಿತು ಮಾಹಿತಿ ನೀಡಲು ಚಿತ್ರತಂಡ ಪತ್ರಿಕಾಗೋಷ್ಠಿ ಆಯೋಜಿಸಿತ್ತು. "ಕಾಡ", ನನ್ನ ನಿರ್ದೇಶನದ ಮೂರನೇ ಚಿತ್ರ. ಸೈಕೋ ಥ್ರಿಲ್ಲರ್ ಕಥಾಹಂದರ ಹೊಂದಿರುವ ಈ ಚಿತ್ರದ ಕಥೆ ಸ್ವಲ್ಪ ವಿಭಿನ್ನವಾಗಿದೆ. ಇದೊಂದು ಸೈಕೋ ಪಾತ್‌ಗಳ ಕುರಿತಾದ ಸಿನಿಮಾ. ನಾನು ಇದರ ಕುರಿತು ಸಾಕಷ್ಟು ಅಧ್ಯಯನ ಮಾಡಿ, ಕೆಲವರಿಂದ ವಿಷಯ ತಿಳಿದುಕೊಂಡು ಕಥೆ ಬರೆದಿದ್ದೇನೆ. ಒಂದು ಅಧ್ಯಯನದ ಪ್ರಕಾರ ಶೇಕಡಾ 2ರಷ್ಟು ಜನರು ಯಾವುದೊ ಕಾರಣಕ್ಕಾಗಿ ಸೈಕೋಗಳಾಗುವುದಿಲ್ಲ. ಹುಟ್ಟುತ್ತಲೇ ಅವರು ಸೈಕೋಪಾತ್‌ಗಳಾಗಿರುತ್ತಾರೆ. ಇದನ್ನೇ ಕೇಂದ್ರವಾಗಿಟ್ಟುಕೊಂಡು ಕಥೆ ಬರೆದಿದ್ದೇನೆ. ಎರಡು ಕಥೆಯಿಂದ ಶುರುವಾಗುವ ಈ ಚಿತ್ರ ಹೋಗುತ್ತಾ ಹೋಗುತ್ತಾ ಒಂದೇ ಕಥೆ ಆಗುತ್ತದೆ. ಜೆ.ಕೆ ಅವರಂತೂ ಬಹಳ ಅದ್ಭುತವಾಗಿ ನಟಿಸಿದ್ದಾರೆ. ಅವರು ಈವರೆಗೂ ಮಾಡಿರದ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಕಾವ್ಯಶೆಟ್ಟಿ, ಅಚ್ಯುತಕುಮಾರ್, ಉಗ್ರಂ ಮಂಜು, ಶ್ರೀರಾಮ್ ಮುಂತಾದ ಕಲಾವಿದರ ಅಭಿನಯ ಉತ್ತಮವಾಗಿದೆ. ನಮ್ಮ ಜೊತೆಗೆ ಇರದ ಸತೀಶ್ ಬಾಬು ಅವರ ಸಂಗೀತ ನಿರ್ದೇಶನ, ಅರುಣ್ ಸುರೇಶ್ ಛಾಯಾಗ್ರಹಣ, ವಿಕಾಸ್‌ಚಂದ್ರ ಸಂಕಲನವಿರುವಈ ಚಿತ್ರಕ್ಕೆ ನಾನು ಹಾಗೂ ರಮೇಶ್ ಸಾಹಸ ನಿರ್ದೇಶನ ಮಾಡಿದ್ದೇವೆ ಎಂದರು.



## ಧನಂಜಯ ನಿರ್ಮಾಣದ ಹೊಸ ಹಾಸ್ಯ ವೆಬ್ ಸರಣಿ ಘೋಷಣೆ

ಖ್ಯಾತ ನಟ ಡಾಲಿ ಧನಂಜಯ (ಕಾಳೇನಹಳ್ಳಿ ಅಡವಿ ಸ್ವಾಮಿ ಧನಂಜಯ) ತಮ್ಮ ಡಾಲಿ ಪಿಕ್ಚರ್ಸ್ ಲಾಂಛನದಲ್ಲಿ "ಜೆರಾಕ್ಸ್" ಎಂಬ ಹೊಸ ಫ್ಯಾಂಟಸಿ ಕಾಮಿಡಿ ಥ್ರಿಲ್ಲರ್ ವೆಬ್ ಸರಣಿಯನ್ನು ಘೋಷಿಸಿದ್ದಾರೆ. ಇದು ಡಾಲಿ ಧನಂಜಯ ಅವರ ಮೊದಲ ಓಟಿಟಿ ನಿರ್ಮಾಣವಾಗಿದೆ. ಜೀ5 ಹಾಗೂ ಡಾಲಿ ಪಿಕ್ಚರ್ಸ್ ಸಹಯೋಗದಲ್ಲಿ ಮೂಡಿಬರುತ್ತಿರುವ ಈ ಸರಣಿಯನ್ನು 'ಬ್ಲಿಂಕ್' ಚಿತ್ರದ ಖ್ಯಾತಿಯ ನಿರ್ದೇಶಕ ಶ್ರೀನಿಧಿ ಬೆಂಗಳೂರು ನಿರ್ದೇ ಶಿಸಲಿದ್ದಾರೆ. ಅವರ 'ಬ್ಲಿಂಕ್' ಚಿತ್ರ ತನ್ನ ವಿಭಿನ್ನ ಕಥಾವಸ್ತುವಿಗಾಗಿ ಪ್ರಸಿದ್ಧಿ ಪಡೆದು ಫಿಲಂಫೇ ರ್ ಪ್ರಶಸ್ತಿಯನ್ನೂ ಗಳಿಸಿತ್ತು. ಇದೀಗ ಅವರು "ಜೆರಾಕ್ಸ್" ಮೂಲಕ ಮತ್ತೊಂದು ಡಾರ್ಕ್ ಹಾಸ್ಯ ಥ್ರಿಲ್ಲರ್ ಕಥೆಯೊಂದಿಗೆ ಪ್ರೇಕ್ಷಕರನ್ನು ರಂಜಿಸಲು ಸಜ್ಜಾಗಿದ್ದಾರೆ. ಈ ವೆಬ್ ಸರಣಿಯ ಘೋಷಣೆಯೊಂದಿಗೆ ಜೀ5 ಮತ್ತೊಮ್ಮೆ ಎಲ್ಲರ ಗಮನ ಸೆಳೆದಿದೆ. ಕನ್ನಡ ಮಣ್ಣಿನ ಸೊಗಡನ್ನು ಪ್ರತಿಬಿಂಬಿಸುವ ಕಥೆಗಳನ್ನು ಪ್ರೋತ್ಸಾಹಿಸುವ ವೇದಿಕೆಯಾಗಿ ಪ್ರಸಿದ್ಧವಾಗಿರುವ ಜೀ5, ಇದೀಗ "ಜೆರಾಕ್ಸ್" ಮೂಲಕ ಪ್ರೇಕ್ಷಕರನ್ನು ತನ್ನತ್ತ ಸೆಳೆಯುತ್ತಿದೆ ಎಂದರು.



## 'ಸೆಪ್ಟೆಂಬರ್ 21' ಚಿತ್ರದ ಟೀಸರ್ ಬಿಡುಗಡೆ

ಕನ್ನಡ ಹಾಗೂ ಹಿಂದಿ ಭಾಷೆಗಳಲ್ಲಿ ಏಕಕಾಲಕ್ಕೆ ತಯಾರಾಗಿರುವ ಬಹುನಿರೀಕ್ಷಿತ 'ಸೆಪ್ಟೆಂಬರ್ 21' ಚಿತ್ರದ ಟೀಸರ್ ಇತ್ತೀಚೆಗಷ್ಟೇ ಬಿಡುಗಡೆಯಾಗಿದ್ದು, ಪ್ರೇಕ್ಷಕರಲ್ಲಿ ಹೊಸ ಕುತೂಹಲ ಮೂಡಿಸಿದೆ. ಕೇವಲ 22 ವರ್ಷದ ನಿರ್ದೇಶಕಿ ಕರೆನ್ ಕ್ಷಿತಿಸುವರ್ಣ ಅವರ ಚೊಚ್ಚಲ ನಿರ್ದೇಶನದಲ್ಲಿ ಮೂಡಿಬಂದಿರುವ ಈ ಸಿನಿಮಾ, ಅಲ್ಜೈಮರ್ಸ್ ಅಥವಾ ಮರೆಗುಳಿತನ ಎಂಬ ಗಂಭೀರ ವಿಷಯವನ್ನು ಅತ್ಯಂತ ಪರಿಣಾಮಕಾರಿಯಾಗಿ ತೆರೆಯ ಮೇಲೆ ತಂದಿದೆ. ಮರೆಗುಳಿತನದ ಕಥಾ ಹಂದರ ಸಾಮಾನ್ಯವಾಗಿ ಅಲ್ಜೈಮರ್ಸ್ ಬಗ್ಗೆ ಸಮಾಜದಲ್ಲಿ ಚರ್ಚೆಗಳಾಗುತ್ತವೆ. ಆದರೆ ಆ ಕಾಯಿಲೆಗೆ ತುತ್ತಾದವರ ಮತ್ತು ಅವರನ್ನು ಹಗಲಿರುಳು ಆರೈಕೆ ಮಾಡುವವರ ಒಳಗಿನ ತಳಮಳವನ್ನು ಈ ಚಿತ್ರದಲ್ಲಿ ಅತ್ಯಂತ ನೈಜವಾಗಿ ಚಿತ್ರಿಸಲಾಗಿದೆ. ಈ ಟೀಸರ್ ಪ್ರೇಕ್ಷಕರಿಗೆ ಕೇವಲ ದೃಶ್ಯಗಳನ್ನು ತೋರಿಸುವುದಲ್ಲದೆ, ಕಳೆದು ಹೋಗುತ್ತಿರುವ ನೆನಪುಗಳ ನೋವನ್ನು ಮೌನವಾಗಿ ಅನುಭವಿಸುವಂತೆ ಮಾಡುತ್ತದೆ. ಇದು ಕೇವಲ ಸಿನಿಮಾವಲ್ಲ, ಒಂದು ಭಾವನಾತ್ಮಕ ಪಯಣ ಎಂಬ ಭರವಸೆಯನ್ನು ನೀಡುತ್ತದೆ. ಚಿತ್ರದಲ್ಲಿ ಪ್ರವೀಣ್ ಸಿಂಗ್ ಸಿಸೋಡಿಯಾ ಮರೆಗುಳಿತನದಿಂದ ತನ್ನ ಅಸ್ತಿತ್ವವನ್ನೇ ಮರೆಯುತ್ತಿರುವ ವ್ಯಕ್ತಿಯ ಪಾತ್ರದಲ್ಲಿ ನಟಿಸಿದ್ದಾರೆ.



## ಮೊದಲ ಹಾಡಿನಲ್ಲಿ ಮೋಡಿ ಮಾಡಿದ 'ಪಿಚ್ಚರ್'

ಗೋಲ್ಡನ್ ಮೂವೀಸ್ ಲಾಂಛನದಲ್ಲಿ ಸದಭಿರುಚಿ ಚಿತ್ರಗಳ ನಿರ್ಮಾಪಕಿ ಶಿಲ್ಪಾ ಗಣೇಶ್ ಅವರು ನಿರ್ಮಿಸಿರುವ ಸಂದೀಪ ಬೆದ್ರ ಚೊಚ್ಚಲ ನಿರ್ದೇಶನದ ಹಾಗೂ ನಿತ್ಯಪ್ರಕಾಶ್ ಬಂಟ್ವಾಳ ನಾಯಕನಾಗಿ ನಟಿಸಿರುವ ಚಿತ್ರ "ಪಿಚ್ಚರ್". ಕನ್ನಡ ಹಾಗೂ ತುಳು ಎರಡು ಭಾಷೆಗಳಲ್ಲೂ ನಿರ್ಮಾಣವಾಗಿರುವ ಈ ಚಿತ್ರದ ಮೊದಲ ಹಾಡು ಇತ್ತೀಚೆಗೆ ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿದೆ. ಕನ್ನಡದಲ್ಲಿ ಈ ಹಾಡನ್ನು ಚೇತನ್ ಕುಮಾರ್ ಬರೆದರೆ, ತುಳುವಿನಲ್ಲಿ ಅನೂಪ್ ಭಂಡಾರಿ ಬರೆದಿದ್ದಾರೆ. ಬಿಡುಗಡೆಯಾದ ಕ್ಷಣದಿಂದಲೇ ಹಾಡಿಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಸ್ಯಾಮುಯೆಲ್ ಅಭಿ ಸಂಗೀತ ನೀಡಿದ್ದಾರೆ. ಚಿತ್ರದಲ್ಲಿ ನಾಲ್ಕು ಹಾಡುಗಳಿದ್ದು, ಈಗ ಮೊದಲ ಹಾಡು ಬಿಡುಗಡೆಯಾಗಿದೆ. ಉಳಿದ ಹಾಡುಗಳು ಸದ್ಯದಲ್ಲೇ ಅನಾವರಣವಾಗಿದೆ. ಕೌಟುಂಬಿಕ, ಕಾಮಿಡಿ ಕಥಾಹಂದರ ಹೊಂದಿರುವ ಈ ಚಿತ್ರದಲ್ಲಿ ಮನೋರಂಜನೆಯೇ ಪ್ರಧಾನ.



## ಶ್ರೇಯಸ್ ಮಂಜುಗೆ ದಿಲ್‌ದಾರ್ ಬರ್ತ್‌ಡೇ ಟೀಸರ್ ಉಡುಗೊರೆ !



ಪಡ್ಡೆಹುಲಿಯಾಗಿ ಪ್ರೇಕ್ಷಕರನ್ನೆಲ್ಲ ಸೆಳೆದುಕೊಂಡಿರುವ ಶ್ರೇಯಸ್ ಮಂಜು ಅವರಿಗಿಂದು ಹುಟ್ಟುಹಬ್ಬದ ಸಂಭ್ರಮ. ಅದಕ್ಕೆ ಉಡುಗೊರೆ ಎಂಬಂತೆ ದಿಲ್‌ದಾರ್ ಚಿತ್ರತಂಡ ಬರ್ತ್‌ಡೇ ಟೀಸರ್ ಬಿಡುಗಡೆಗೊಳಿಸಿದೆ. ಆರಂಭದಿಂದಲೂ ಆಕ್ಷನ್ ಲುಕ್ಕಲ್ಲಿ ಮಿಂಚುತ್ತಾ ಬಂದಿರುವ ಶ್ರೇಯಸ್ ಮಂಜು, ಸದರಿ ಟೀಸರ್‌ನಲ್ಲಿ ಮತ್ತೊಂದು ಮಟ್ಟದ ಆಕ್ಷನ್ ಅವತಾರದಲ್ಲಿ ವಿಜೃಂಭಿಸಿದ್ದಾರೆ. ಈ ಟೀಸರ್‌ಗೀಗ ಸಾಮಾಜಿಕ ಜಾಲತಾಣಗಳಲ್ಲಿ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ದಿಲ್‌ದಾರ್ ಮಧು ಗೌಡ ಗಂಗೂರ್ ನಿರ್ದೇಶನದಲ್ಲಿ ಮೂಡಿ ಬಂದಿರುವ ಚಿತ್ರ. ಇದೀಗ ಬಹುತೇಕ ಕೆಲಸ ಕಾರ್ಯಗಳನ್ನು ಮುಗಿಸಿಕೊಂಡು ಬಿಡುಗಡೆಯ ಸನ್ನಾಹದಲ್ಲಿದೆ. ಈ ಸಿನಿಮಾ ಈವತ್ತಿನ ಹೊಸ ತಲೆಮಾರಿಗೆ ನೇರಾನೇರ ಹೊಂದಿಕೆಯಾಗುವಂಥಾ ವಿಶಿಷ್ಟ ಕಥೆಯನ್ನೊಳಗೊಂಡಿದೆ ಎಂಬುದು ನಿರ್ದೇಶಕರ ಮಾತು.

## ಈ ವಾರ ತೆರೆಗೆ ಆದಿತ್ಯ ಅಭಿನಯದ 'ಟೆರರ್'

ತಮ್ಮ ಅಭಿನಯದ ಮೂಲಕ ಜನಮನ ಗೆದ್ದಿರುವ ಆದಿತ್ಯ ನಾಯಕರಾಗಿ ನಟಿಸಿರುವ ಸಿಲ್ಕ್ ಮಂಜು, ರವಿ ಹಾಗೂ ಸ್ಮಿತಾ ವಸಿಷ್ಠ ಅವರು ಉಪ್ಪಿ ಎಂಟರ್‌ಟೈನರ್ಸ್ ಲಾಂಛನದಲ್ಲಿ ನಿರ್ಮಿಸಿರುವ ಹಾಗೂ ರಂಜನ್ ಶಿವರಾಮ್ ಗೌಡ ನಿರ್ದೇಶನದ "ಟೆರರ್" ಚಿತ್ರ ಈ ವಾರ ಏಪ್ರಿಲ್ 10ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಈಗಾಗಲೇ ಟೀಸರ್ ಹಾಗೂ ಹಾಡುಗಳ ಮೂಲಕ ಚಿತ್ರ ಎಲ್ಲರ ಗಮನ ಸೆಳೆದಿದೆ. ರಂಜನ್ ಶಿವರಾಮ ಗೌಡ ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡುತ್ತಿದ್ದಾರೆ. ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಕೂಡ ರಂಜನ್ ಅವರದೆ. ನವೀನ್ ಅಕ್ಷಿ ಛಾಯಾಗ್ರಹಣ ಹಾಗೂ ಶ್ರೀಕಾಂತ್ ಅವರ ಸಂಕಲನವಿರುವ ಈ ಚಿತ್ರಕ್ಕೆ ಕನಲ್ ಕಣ್ಣನ್ ಸಾಹಸ ನಿರ್ದೇಶನ ಹಾಗೂ ಭಾನು ಮಾಸ್ಟರ್, ಭೂಷಣ್ ಮಾಸ್ಟರ್ ಅವರ ನೃತ್ಯ ನಿರ್ದೇಶನವಿದೆ. ಆದಿತ್ಯ ಈ ಹಿಂದೆ ಅಭಿನಯಿಸಿರುವ ಪಾತ್ರಗಳಿಗಿಂತ ವಿಭಿನ್ನ ಪಾತ್ರದಲ್ಲಿ ಅಭಿನಯಿಸಿದ್ದಾರೆ. "ಟೆರರ್"ನಲ್ಲಿ ಗ್ಯಾಂಗ್ ಸ್ಟರ್ ಆಗಿ ಆದಿತ್ಯ ಕಾಣಿಸಿಕೊಂಡಿದ್ದಾರೆ.



## ಈ ವಾರ ತೆರೆಗೆ 'ಕ್ಯಾಲೆಂಡರ್'

ಈ ಹಿಂದೆ 'ಸ್ವಾರ್ಥ ರತ್ನ' ಸೇರಿದಂತೆ ಎರಡು ಸಿನಿಮಾಗಳಲ್ಲಿ ನಾಯಕನಾಗಿ ನಟಿಸಿದ್ದ ಆದರ್ಶ ಗುಂಡುರಾಜ್ ಅಭಿನಯದ 'ಕ್ಯಾಲೆಂಡರ್' ಚಿತ್ರ ಈ ವಾರ ಏಪ್ರಿಲ್ 10ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಮಹಿಳಾ ಪ್ರಧಾನ ಈ ಚಿತ್ರ ಈಗಾಗಲೇ ಟ್ರೇಲರ್ ಹಾಗೂ ಹಾಡುಗಳ ಮೂಲಕ ಜನಪ್ರಿಯವಾಗಿದೆ. ಆದರ್ಶ ಗುಂಡುರಾಜ್ ಅವರೆ ನಿರ್ಮಿಸಿ ನಾಯಕನಾಗೂ ನಟಿಸಿರುವ ಈ ಚಿತ್ರದ ನಾಯಕಿಯರಾಗಿ ನಿವಿಷ್ಕ ಪಾಟೀಲ್ ಹಾಗೂ ಸುಶ್ಮಿತ ನಟಿಸಿದ್ದಾರೆ.ಕನಸಿನ ರಾಣಿ ಮಾಲಾಶ್ರೀ ಅವರು ವಿಶೇಷ ಪಾತ್ರದಲ್ಲಿ ಅಭಿನಯಿಸಿದ್ದಾರೆ. ರಮೇಶ್ ಇಂದಿರಾ, ಪ್ರಮೋದ್ ಶೆಟ್ಟಿ, ಪ್ರಕಾಶ್ ತುಮ್ಮಿನಾಡು, ಸುಚೇಂದ್ರ ಪ್ರಸಾದ್, ಚಂದ್ರಪ್ರಭ ಮುಂತಾದವರು ತಾರಾಬಳಗದಲ್ಲಿದ್ದಾರೆ.






## ಯೂಟ್ಯೂಬ್‌ನಲ್ಲಿ ದಾಖಲೆ.. ಮಲೈಕಾ ಸಾಂಗ್..



ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ನಟನೆಯ 'ಮಾರ್ಕ್' ಸಿನಿಮಾದ 'ಮಸ್ತ್ ಮಲೈಕಾ' ಹಾಡು ಈಗ ದಾಖಲೆ ಬರೆದಿದೆ. ಬಿಡುಗಡೆ ಯಾದ ಬಳಿಕ ಈ ಪಾರ್ಟಿ ಸಾಂಗ್ ಸಖತ್ ಕ್ರೇಜ್ ಕ್ರಿಯೇಟ್ ಮಾಡಿತ್ತು. ಪುಟ್ಟ ಪುಟ್ಟ ಮಕ್ಕಳಿಂದ ಹಿಡಿದು ದೊಡ್ಡವರ ಬಾಯಲ್ಲಿ ನೋಡಿದ್ರೂ ಮಲೈಕಾಳದ್ದೇ ಮಸ್ತ್ ಮಸ್ತ್ ಗುನುಗು. ಅಕ್ಷರಮಟ್ಟಿಗೆ 'ಮಸ್ತ್ ಮಲೈಕಾ' ಹಾಡು ಭರ್ಜರಿ ಹಿಟ್ ಆಗಿದೆ. ಸರೆಗಮ ಕನ್ನಡ ಯೂಟ್ಯೂಬ್‌ನಲ್ಲಿ ಮಸ್ತ್ ಮಲೈಕಾ ಗೀತೆ ಐದು ಮಿಲಿಯನ್ ಗಟ್ಟಲೇ ವ್ಯೂಸ್ ಕಂಡಿದೆ. ಈ ಮೂಲಕ ಕಿಚ್ಚನ ಮಾರ್ಕ್ ಚಿತ್ರದ ಹಾಡು ರೆಕಾರ್ಡ್ ಕ್ರಿಯೇಟ್ ಮಾಡಿದೆ. ಮಸ್ತ್ ಮಲೈಕಾ ಹಾಡನ್ನು ಸಾನ್ವಿ ಸುದೀಪ್ ಮತ್ತು ನಕಾಶ್ ಅಜೀಜ್ ಹಾಡಿದ್ದಾರೆ. ಈ ಸಿನಿಮಾಗೆ ಅಜನೀಶ್ ಬಿ. ಲೋಕನಾಥ್ ಅವರು ಸಂಗೀತ ನೀಡಿದ್ದಾರೆ.

## ಏ.15ಕ್ಕೆ ಹೊಂಬಾಳೆಯಿಂದ 'ಪಳ್ಳಿ ಚಟ್ಟಂಬಿ' ತೆರೆಗೆ



ಮಲಯಾಳಂ ನಟ ಟೊವಿನೋ ಥಾಮಸ್ ಹಾಗೂ ಕನ್ನಡದ ಮೂಲಕ ಚಿತ್ರರಂಗಕ್ಕೆ ಕಾಲಿಟ್ಟ ಕಯಾದು ಲೋಹರ್ ಅಭಿನಯದ 'ಪಳ್ಳಿ ಚಟ್ಟಂಬಿ' ಸಿನಿಮಾ ಏಪ್ರಿಲ್ 15ರಂದು ತೆರೆಗೆ ಬರಲು ಸಿದ್ಧವಾಗಿದೆ. ಮಲಯಾಳಂ ಜೊತೆಗೆ ಕನ್ನಡದಲ್ಲೂ ಈ ಸಿನಿಮಾ ತೆರೆಗೆ ಬರುತ್ತಿರುವುದು ವಿಶೇಷ. 'ಪಳ್ಳಿ ಚೆಟ್ಟಂಬಿ' ಚಿತ್ರವನ್ನು ವರ್ಲ್ಡ್‌ವೈಡ್ ಫಿಲಂಸ್, ಸಿ ಕ್ಯೂಬ್ ಬ್ರೋಸ್ ಎಂಟರ್ಟೇನ್ಮೆಂಟ್ ಅಡಿಯಲ್ಲಿ ನೌಫಲ, ಬ್ರಿಜೇಶ್, ಚಾಣುಕ್ಯ ಚೈತನ್ಯ, ಚರಣ್ ನಿರ್ಮಾಣ ಮಾಡಿದ್ದಾರೆ. ಡಿಜೋ ಜೊಸೆ ಆಂಟೋನಿ ನಿರ್ದೇಶಿಸಿದ್ದಾರೆ. ಹೊಂಬಾಳೆ ಫಿಲಂಸ್ ಕರ್ನಾಟಕದಲ್ಲಿ ಈ ಚಿತ್ರದ ಹಂಚಿಕೆ ಹಕ್ಕನ್ನು ಪಡೆದುಕೊಂಡಿದೆ. ಈ ಚಿತ್ರಕ್ಕೆ ಎಸ್ ಸುರೇಶ್ ಬಾಬು ಕಥೆ, ಟಿಜೋ ಟಾಮಿ ಛಾಯಾಗ್ರಹಣ, ಶ್ರೀಜಿತ್ ಸಾರಂಗ್ ಸಂಕಲನ, ಜೇಕ್ಸ್ ಬಿಜೋಯ್ ಸಂಗೀತ ಚಿತ್ರಕ್ಕಿದೆ.

## ಏಪ್ರಿಲ್ 10ಕ್ಕೆ '90 ಎಮ್ ಎಲ್'..




ಕರಾವಳಿಯ ಸಿನಿಪ್ರಿಯರು ಕಾತರದಿಂದ ಕಾಯುತ್ತಿದ್ದ "90 ಎಮ್ ಎಲ್" ತುಳು ಚಲನಚಿತ್ರವು ಏಪ್ರಿಲ್ 10ರಂದು ಅದ್ದೂರಿ ಯಾಗಿ ತೆರೆಗೆ ಬರಲು ಸಿದ್ಧವಾಗಿದೆ. ಡಿ ಡಿ ಪ್ರೊಡಕ್ಷನ್ ಲಾಂಛನದಲ್ಲಿ ನಿರ್ಮಾಣ ವಾಗಿರುವ ಈ ಚಿತ್ರವು ಕರಾವಳಿಯಾದ್ಯಂತ ಮನರಂಜನೆಯ ಹೊಸ ಸಂಚಲನ ಸೃಷ್ಟಿಸಲಿದೆ ಎಂದು ಚಿತ್ರದ ನಾಯಕ ನಟ ವಿನೀತ್ ಕುಮಾರ್ ಪತ್ರಿಕಾಗೋಷ್ಠಿಯಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ರಂಜಿತ್ ಸಿ. ಬಜಾಲ್ ಅವರ ನಿರ್ದೇಶನ ಹಾಗೂ ಡೋಲಿ ಡಿ ಸೋಜ ಅವರ ನಿರ್ಮಾಣದಲ್ಲಿ ಮೂಡಿಬಂದಿದೆ. ಈ ಚಿತ್ರವು ಮಂಗಳೂರು, ಉಡುಪಿ, ಪುತ್ತೂರು, ಬೆಳ್ತಂಗಡಿ, ಕಾರ್ಕಳ, ಸುಳ್ಯ, ದೇರಳಕಟ್ಟೆ, ಸುರತ್ಕಲ್ ಮತ್ತು ಪಡುಬಿದ್ರಿ ಸೇರಿದಂತೆ ಪ್ರಮುಖ ಕೇಂದ್ರಗಳಲ್ಲಿ ಏಕಕಾಲಕ್ಕೆ ಬಿಡುಗಡೆಯಾಗಲಿದೆ. ದಕ್ಷಿಣ ಕನ್ನಡ ಜಿಲ್ಲೆಯ ನಿಸರ್ಗ ರಮಣೀಯ ತಾಣಗಳಲ್ಲಿ ಚಿತ್ರೀಕರಣ ನಡೆಸಿರುವುದು ಈ ಸಿನಿಮಾದ ವಿಶೇಷತೆಗಳಲ್ಲೊಂದು.

## 5 ಭಾಷೆಯಲ್ಲಿ ಜಂಗಲ್ ಬೂಗಿ!



ಜಂಗಲ್ ಬೂಗಿ..ಇದು ಹೊಸ ರಿಯಾಲಿಟಿ ಶೋ..ಟೈಟಲ್ ಹೇಳುವಂತೆ ಕಾಡಿನಲ್ಲಿ ನಡೆಯುವ ಶೋ. ಕನ್ನಡ, ತೆಲುಗು, ತಮಿಳು, ಮಲಯಾಳಂ ಹಾಗೂ ಹಿಂದಿ ಭಾಷೆಯಲ್ಲಿ ಮೂಡಿ ಬರಲಿದೆ. ಒಂದು ಟೀಂನಲ್ಲಿ 12 ಜನ ಭಾಗಿಯಾಗಲಿದ್ದು, ಇವರು ಕಾಡಿನಲ್ಲಿ 60 ದಿನ ಕಳೆಯಬೇಕು. ಈ ವಿಭಿನ್ನ ಬಗೆಯ ರಿಯಾಲಿಟಿ ಶೋಅನ್ನು ವಿನೋದ್ ಪಾರ್ಥ ಸಾರಥಿ ನಿರ್ಮಾಣ ಮಾಡುತ್ತಿದ್ದಾರೆ. ಯಶೋಧರ ವಿಕ್ರಮ್ ಈ ಶೋನ ಸಾರಥಿ ಅಂದರೆ ನಿರ್ದೇಶಕರು. ಪಾಲ್ಸ್ ನಾಗ ಹಾಗೂ ಸಂದೀಪ್ ತೀರ್ಥಹಳ್ಳಿ ಅಸೋಸಿಯೇಟ್ ಡೈರೆಕ್ಟರ್ ಆಗಿ ಸಾಥ್ ಕೊಡುತ್ತಿದ್ದಾರೆ. ಆಡಿ ನಾಗಾರ್ಜುನ್ ಕ್ಯಾಮೆರಾ ಹಿಡಿಯಲಿದ್ದಾರೆ ಇದೇ ತಿಂಗಳ 15ರಿಂದ ಆಡಿಷನ್ ಶುರು ವಾಗಲಿದ್ದು, ಮೇ ಕೊನೆಯಲ್ಲಿ ಶೂಟಿಂಗ್ ಆರಂಭವಾಗಲಿದೆ. ಜಂಗಲ್ ಬೂಗಿ ರಿಯಾಲಿಟಿ ಶೋನಲ್ಲಿ ಸಾಮಾನ್ಯರು ಭಾಗಿ ಯಾಗುವ ಅವಕಾಶವಿದೆ. ಆದರೆ ವಯಸ್ಸು 18 ರಿಂದ 28 ಮೀರಬಾರದು.

## 'ಎರೆಯ' ನಿರ್ದೇಶನ ಕೆ.ಎಂ. ಚೈತನ್ಯ



6 ನೇ ಶತಮಾನದ ಭಾರತದಲ್ಲಿ ಆಡಳಿತ ನಡೆಸಿದ ದಕ್ಷಿಣ ಭಾರತದ ದಂತಕಥೆ ಯೆನಿಸಿರುವ ಚಕ್ರವರ್ತಿ ಇಮ್ಮಡಿ ಪುಲಕೇಶಿ ಅವರ ಜೀವನ ಮತ್ತು ಪರಂಪರೆಯನ್ನು ಆಧರಿಸಿದ ಮಹಾಕಾವ್ಯ ಚಲನಚಿತ್ರವಾದ "ಎರೆಯ"ದ ನಿರ್ಮಾಣವನ್ನು ಮಾಡುವುದರ ಮೂಲಕ ವಿಂಗ್‌ಸ್ಪ್ಯಾನ್ ಮೋಷನ್ ಪಿಕ್ಚರ್ಸ್ ಒಂದು ಅಭೂತಪೂರ್ವ ಸಿನಿಮಾ ಸಾಹಸ ಗಾಥೆಗೆ ಮುನ್ನುಡಿ ಬರೆಯಲಿದೆ. ಸುನೀತ್ ಜಾವಡೇಕರ್ ಮತ್ತು ನಿವೇದಿತಾ ಕೊಠಾರೆ ನಿರ್ಮಿಸಲಿರುವ "ಎರೆಯ" ಚಿತ್ರವನ್ನು ಕೆ ಎಂ ಚೈತನ್ಯ ನಿರ್ದೇಶನ ಮಾಡಲಿದ್ದಾರೆ. 'ಚಕ್ರವರ್ತಿ ಇಮ್ಮಡಿ ಪುಲಕೇಶಿಯ ಸಾಹಸ, ಚಾತುರ್ಯ ಮತ್ತು ಅದ್ವಿತೀಯ ಆಡಳಿತ ಸೂತ್ರಗಳ ಮೂಲಕ ವಿಶಾಲ ಸಾಮ್ರಾಜ್ಯವನ್ನು ಆಳಿದ ಅವರ ಆಳ್ವಿಕೆಯನ್ನು, ಇಮ್ಮಡಿ ಪುಲ ಕೇಶಿಯ ಕಾಲವನ್ನು ಇತಿಹಾಸದಲ್ಲಿ ಒಂದು ಸುವರ್ಣಯುಗ ಎಂದೇ ಹೇಳಲಾಗುತ್ತದೆ. ಡಾ. ಭೂಷನ್ ಶಾನಭಾಗ್ ಅವರ ಆಳವಾದ ಸಂಶೋಧನೆಯನ್ನು ಆಧರಿಸಿ ಚಿತ್ರಕಥೆಯನ್ನು ಹೆಣೆಯಲಾಗಿದೆ.







KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021